ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಆರನೇ ಅಧಿವೇಶನ)

ಕಾರ್ಯಕಲಾಪಗಳ ಪಟ್ಟಿ

ಮಂಗಳವಾರ, ದಿನಾಂಕ 03ನೇ ಫೆಬ್ರವರಿ, 2015
(ಸಮಯ: ಬೆಳಗ್ಗೆ 11.00 ಗಂಟೆಗೆ)

-----

1. ಸಂತಾಪ ಸೂಚನೆ

2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಮೊದಲನೇ ಪಟ್ಟಿ

3. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಎ.ಎಸ್.ಪಾಟೀಲ್ (ನಡಹಳ್ಳಿ) ಅವರು ವಿಜಯಪುರ ಜಿಲ್ಲೆ ಮುದ್ದೇಬಿಹಾಳ ತಾಲ್ಲೂಕಿನ ತಾಳಿಕೋಟಿ ವ್ಯಾಪ್ತಿಯಲ್ಲಿ ಹವಾಮಾನ ವೈಪರಿತ್ಯ ಹಾಗೂ ನಂಜಾಣು ರೋಗದಿಂದ ತೊಗರಿ, ಕಡಲೆ ಹಾಗೂ ಸೂರ್ಯಕಾಂತಿ ಬೆಳೆಗಳು ನಾಶವಾಗಿರುವುದರಿಂದ ರೈತರಿಗೆ ಸೂಕ್ತ ಪರಿಹಾರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2. ಶ್ರೀ ಎಸ್.ಎನ್.ಸುಬ್ಬಾರೆಡ್ಡಿ ಅವರು 2014-15ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿಯಲ್ಲಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

ಮು.ತಿ.ನೋ.,.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2015ರ ಫೆಬ್ರವರಿ 02ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ"
ಎಂದು ಶ್ರೀ ಬಸವರಾಜ್ ರಾಯರೆಡ್ಡಿ ಅವರು ಸೂಚಿಸುವುದು.

ಶ್ರೀ ಎಸ್.ಟಿ.ಸೋಮಶೇಖರ್ ಅವರು ಅನುಮೋದಿಸುವುದು.

ಪಿ. ಓಂಪ್ರಕಾಶ
ಕಾರ್ಯದರ್ಶಿ

Raj N

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm